ಶ್ರೀ ನಿರಾಣಿ ಮುರಗೇಶ್ ರುದ್ರಪ್ಪ (ಬೀಳಗಿ)121(228)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ)ಬೀಳಗಿ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಎಂಟನೆಯ ತರಗತಿಯಲ್ಲಿ ಬೋದಿಸುತ್ತಿರುವ ಶಾಲೆಗಳೆಷ್ಟು,

ಆ) ಈ ಶಾಲೆಗಳಲ್ಲಿ ಎಂಟನೆಯ ತರಗತಿ ಗುಣಾತ್ಮಕ ಶಿಕ್ಷಣಕ್ಕಾಗಿ ನೀಡುತ್ತಿರುವ ಸೌಲಭ್ಯಗಳಾವುವು,

ಇ) ಪದವೀಧರ ಕಲಾ ಮತ್ತು ವಿಜ್ಞಾನ ಶಿಕ್ಷಕರನ್ನು ಈ ಶಾಲೆಗಳಿಗೆ ನೇಮಕ ಮಾಡಲಾಗಿದೆಯೇ,

ಈ) ಇಲ್ಲದಿದ್ದಲ್ಲಿ, ಶಿಕ್ಷಕರನ್ನು ತುರ್ತಾಗಿ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಸ್ ಬಸವರಾಜ ಹೊರಟ್ಟಿ

ಅ) 24 ಶಾಲೆಗಳಲ್ಲಿ ಎಂಟನೆಯ ತರಗತಿ ಬೋಧಿಸಲಾಗುತ್ತಿದೆ

ಆ) ಮೂಲಭೂತ ಸೌಲಭ್ಯಗಳ ಜೊತೆಗೆ ಶಿಕ್ಷಕರಿಗೆ ತರಬಾತಿ ನೀಡುವುದು ಹಾಗೂ ಸಂಪನ್ಮೂಲ ಶಿಕ್ಷಕರ ಸೇವೆ ಒದಗಿಸಿ ಗುಣಾತ್ಮಕ ಶಿಕ್ಷಣ ಒದಗಿಸಲಾಗುತ್ತಿದೆ

ಇ) ಪದವೀಧರ ವಿಜ್ಞಾನ ವಿಷಯ ಶಿಕ್ಷಕರನ್ನು ಹೊಸ ನೇಮಕಾತಿ ಮೂಲಕ ನೇಮಕಾತಿ ಮಾಡಲಾಗಿದೆ

ಈ) ಪ್ರಾಥಮಿಕ ಶಾಲೆಗಳಲ್ಲಿ ಕಲಾ ಪದವಿ ಪೂರ್ವ ಶಿಕ್ಷಣ ಪಡೆದಿರುವ ಶಿಕ್ಷಕರಿಂದ ಕಲಾ ಬೋಧನೆಯನ್ನು ಮಾಡುತ್ತಿದ್ದು, ವಿದ್ಯಾರ್ಥಿಗಳ ಪಾರ ಪ್ರವಚನಗಳಿಗೆ ಯಾವುದೇ ತೊಂದರೆ ಆಗದಂತೆ ಕ್ರಮ ವಹಿಸಲಾಗಿದೆ